ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 347(363)

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 18-02-2022

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ. ಸಂ.	ಪ್ರಶ್ನೆಗಳು	ಉತ್ತರ
(ಅ)	ರಾಜ್ಯದ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್‌ಗಳ ಆಡಳಿತ ಮಂಡಳಿಯ ಅವಧಿ ಮುಕ್ತಾಯ (ಚುನಾಯಿತ) ವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿರುತ್ತದೆ.
(ಆ)	ಇವರ ಅವಧಿ ಮುಗಿದು 8 ತಿಂಗಳಾದರೂ ಚುನಾವಣೆಗಳು ನಡೆಯದೆ ಇರುವುದಕ್ಕೆ ಕಾರಣವೇನು;	ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ 37 ಶಾಸನ 2021 ದಿನಾಂಕ:18-09-2021ರಂತೆ ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ತರಲಾಗಿದ್ದು, ಅದರಂತೆ ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವನ್ನು ರಚಿಸಲಾಗಿದೆ ಮತ್ತು ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ನೇಮಿಸಲಾಗಿದ್ದು, ಆಯ್ಕೆಯಾಗಬೇಕಾಗಿರುವ ಸದಸ್ಯರ ಸಂಖ್ಯೆ ಮತ್ತು ಕ್ಷೇತ್ರಗಳ ಸೀಮಾ ನಿರ್ಣಯವನ್ನು ಗುರುತಿಸುವ ಪ್ರಕ್ರಿಯೆಯನ್ನು ಕೈಗೊಂಡಿರುತ್ತದೆ. ಸದರಿ ಆಯೋಗ ಶಿಫಾರಸ್ಸನ್ನು ಸಲ್ಲಿಸಿದ ನಂತರ ಚುನಾವಣೆಗಳನ್ನು ನಡೆಸಲು ಕ್ರಮಕ್ಕೈಗೊಳ್ಳಲಾಗುವುದು.
(ಇ)	ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯತ್‌ಗಳ ಗಡಿ ನಿರ್ಧಾರ ಮಾಡಲು ರಚಿಸಿರುವ ಸಮಿತಿ ಸರ್ಕಾರಕ್ಕೆ ವರದಿ ನೀಡಿದೆಯೇ;	ವರದಿಯನ್ನು ಸಲ್ಲಿಸಿರುವುದಿಲ್ಲ.
(ಈ)	ಯಾವಾಗ ಚುನಾವಣೆಗಳನ್ನು ನಡೆಸಲಾಗುವುದು?	ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ಕ್ಷೇತ್ರಗಳ ಸೀಮಾ ನಿರ್ಣಯ ಹಾಗೂ ಆಯ್ಕೆಯಾಗಬೇಕಾದ ಸದಸ್ಯರುಗಳ ಸಂಖ್ಯೆಯನ್ನು ನಿರ್ಧರಿಸುವ ಬಗ್ಗೆ ಪ್ರಕ್ರಿಯೆಯನ್ನು ಪ್ರಾರಂಭಿಸಿರುತ್ತದೆ. ಆಯೋಗವು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳ ಚುನಾವಣೆ ನಡೆಸಲು ಕ್ರಮವಹಿಸಲಾಗುತ್ತದೆ.

ಸಂಖ್ಯೆ: ಗ್ರಾಅಪಂರಾ 73 ಜಿಪಸ 2022

(ಕೆ.ಎಸ್.ಈಶ್ವರಪ್ಪ)

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು.